ಗ್ರಾಹಕರ ವ್ಯಾಜ್ಯಗಳ ಪರಿಹಾರ

4705 (5191) : ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕೊಡುಗೆ ಏನು?

ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಗ್ರಾಹಕ ವ್ಯಾಜ್ಯಗಳು ಪರಿಹರಿಸಲ್ಪಟ್ಟಿವೆ; ಎಷ್ಟು ಬಾಕಿ ಇವೆ;

ಇ) ಎಷ್ಟು ಜಿಲ್ಲೆಗಳಲ್ಲಿ ನ್ಯಾಯಾದೀಶ ಅಥವಾ ತತ್ಸಮಾನ ಅಧ್ಯಕ್ಷರು, ಸಿಬ್ಬಂದಿಗಳ ನೇಮಕ ಆಗಿವೆ; ಎಷ್ಟು ಜಿಲ್ಲೆಗಳಲ್ಲಿ ಎಷ್ಟು ಬಾಕಿ ಇವೆ; (ಜಿಲ್ಲಾವಾರು ವಿವರ ನೀಡುವುದು)

ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಗ್ರಾಹಕರ ರಕ್ಷಣಾ ಕಾಯ್ದೆ, 1986 (ಕೇಂದ್ರ ಕಾಯ್ದೆ ಸಂಖ್ಯೆ : 68/86) ರ ಕಲಂ 16 ರಡಿಯಲ್ಲಿ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾವ್ಯಗಳ ಪರಿಹಾರ ಆಯೋಗವು ದಿನಾಂಕ 5.10.1989 ರಿಂದ ರಚಿತಗೊಂಡಿರುತ್ತದೆ.

ಗ್ರಾಹಕರ ರಕ್ಷಣಾ ಕಾಯ್ದೆ, 1986ರ ಕಲಂ 9ರನ್ವಯ 26 ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಬೇಡಿಕೆಗಳು ಕಾರ್ಯ ನಿರ್ವಹಿಸುತ್ತಿದ್ದು, ಉಡುಪಿ, ಗದಗ, ಬಾಗಲಕೋಟೆ ಮತ್ತು ಕೊಪ್ಪಳ ಜಿಲಾ ವೇದಿಕೆಗಳು ಇನ್ನು ಕಾರ್ಯಾರಂಭ ಮಾಡಬೇಕಾಗಿದೆ.

ರಾಜ್ಯ ಆಯೋಗ ಮತ್ತು 26 ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಗಳು ಪ್ರಾರಂಭದಿಂದ ದಿನಾಂಕ: 30.6.2003ರವರೆಗೆ ನೀಡಿರುವ ಕೊಡುಗೆಯು ಈ ಕೆಳಕಂಡಂತಿದೆ:

	ದಾಖಲಾದ ಒಟ್ಟು ಪ್ರಕರಣಗಳು	ಇತ್ಯರ್ಥವಾಗಿರುವ ಒಟ್ಟು ಪ್ರಕರಣಗಳು	ಬಾಕಿಯಿರುವ ಒಟ್ಟು ಪ್ರಕರಣಗಳು
ರಾಜ್ಯ ಆಯೋಗ			
ದೂರುಗಳು	2561	1889	672
ಮೇಲ್ಮನವಿಗಳು	10281	8431	1850
ಜಿಲ್ಲಾ ವೇದಿಕೆಗಳು			
ದೂರುಗಳು	72,525	66,319	626

ಆ) ದಿನಾಂಕ : 1.1.2000 ದಿಂದ 30.6.2003 ರ ವರೆಗೆ ಇತ್ಯರ್ಥವಾಗಿರುವ ಪ್ರಕರಣಗಳು ಹಾಗೂ ದಿನಾಂಕ: 20.6.2003 ರಿಂದೀಚೆಗೆ ಬಾಕಿ ಇರುವ ಪ್ರಕರಣಗಳ ವಿವರ ಈ ಕೆಳಕಂಡಂತೆ ಇರುತ್ತದೆ.

ರಾಜ್ಯ ಆಯೋಗ ಜಿಲ್ಲಾ ವೇದಿಕೆಗಳು	ಇತ್ಯರ್ಥವಾಗಿರುವ ಒಟ್ಟು ಪ್ರಕರಣಗಳೂ	ಬಾಕಿಯಿರುವ ಒಟ್ಟು ಪ್ರಕರಣಗಳು
ರಾಜ್ಯ ಆಯೋಗ		
ದೂರುಗಳು	590	672
ಮೇಲ್ಮನವಿಗಳು	3907	1850
ಜಿಲ್ಲಾ ವೇದಿಕೆಗಳು	15883	6206

ಇ) ಬೆಂಗಳೂರು ಗ್ರಾಮಾಂತರ, ಉಡುಪಿ, ಬಾಗಲಕೋಟೆಯ ಜಿಲ್ಲಾ ಗ್ರಾಹಕರ ವೇದಿಕೆಗಳಲ್ಲಿ ಅಧ್ಯಕ್ಷರ ಹುದ್ದೆಗಳು ಖಾಲಿಯಿದ್ದು, ಭರ್ತಿ ಮಾಡಲು ಆಯ್ಕೆ ಸಮಿತಿಯ ಮುಂದೆ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ ಇನ್ನುಳಿದ ಜಿಲ್ಲಾ ವೇದಿಕೆಗಳ ಅಧ್ಯಕ್ಷರುಗಳ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ 4ನೇ ಅಪರ, ಬೀದರ್, ಬಿಜಾಪುರ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ರಾಯಚೂರು, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಗದಗ್, ಕೊಪ್ಪಳ, ಚಾಮರಾಜನಗರ, ದಾವಣಗೆರೆ ಮತ್ತು ಹಾವೇರಿ ಜಿಲ್ಲಾ ವೇದಿಕೆಯಲ್ಲಿ ಸಹಾಯಕ ರಿಜಿಸ್ಟ್ರಾರ್ ಹುದ್ದೆಗಳು ಖಾಲಿಯಿದ್ದು, ಇನ್ನುಳಿದ ಜಿಲ್ಲೆಗಳಲ್ಲಿ ಭರ್ತಿ ಮಾಡಲಾಗಿದೆ.

ಉಡುಪಿ, ಬಾಗಲಕೋಟೆ, ಗದಗ, ಕೊಪ್ಪಳ ಚಾಮರಾಜನಗರ, ದಾವಣಗೆರೆ, ಮತ್ತು ಹಾವೇರಿ ಜಿಲ್ಲಾ ಗ್ರಾಹಕ ವೇದಿಕೆಗಳಲ್ಲಿ ಶಿರಸ್ತೇದಾರ್ ಹುದ್ದೆಗಳು ಖಾಲಿಯಿದ್ದು, ಇನ್ನುಳಿದ ಜಿಲ್ಲೆಗಳಲ್ಲಿ ಭರ್ತಿ ಮಾಡಲಾಗಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ 3ನೇ ಅಪರ ಮತ್ತು 4ನೇ ಅಪರ, ಬಳ್ಳಾರಿ, ಬೆಳಗಾಂ, ಬೀದರ್, ಬಿಜಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ ಧಾರವಾಡ, ಗುಲ್ಬರ್ಗಾ, ಹಾಸನ, ಕೋಲಾರ, ಕೊಡಗು, ಮಂಡ್ಯ ಮೈಸೂರು, ರಾಯಚೂರು, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಗದಗ, ಕೊಪ್ಪಳ, ಚಮರಾಜನಗರ, ದಾವಣಗೆರೆ ಮತ್ತು ಹಾವೇರಿ ಜಿಲ್ಲಾ ವೇದಿಕೆಗಳಲ್ಲಿ ಶೀಘ್ರಲಿಪಿಗಾರರ ಹುದ್ದೆಗಳು ಖಾಲಿಯಿದ್ದು, ಉಳಿದ ಜಿಲ್ಲೆಗಳಲ್ಲಿ ಭರ್ತಿ ಮಾಡಲಾಗಿದೆ.

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ 3ನೇ ಅಪರ, ಬೆಂಗಳೂರು ನಗರ 4ನೇ ಅಪರ, ಗುಲ್ಬರ್ಗಾ, ಕೋಲಾರ, ರಾಯಚೂರು, ತುಮಕೂರು, ಉಡುಪಿ, ಬಾಗಲಕೋಟೆ, ಗದಗ, ಕೊಪ್ಪಳ, ಚಾಮರಾಜನಗರ ಮತ್ತು ದಾವಣಗೆರೆ ಜಿಲ್ಲಾ ವೇದಿಕೆಗಳಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆ ಖಾಲಿಯಿದ್ದು, ಉಳಿದ ಜಿಲ್ಲೆಗಳಲ್ಲಿ ಭರ್ತಿ ಮಾಡಲಾಗಿದೆ.

ಉಡುಪಿ, ಬಾಗಲಕೋಟೆ, ಗದಗ, ಕೊಪ್ಪಳ, ಚಾಮರಾಜನಗರ ಜಿಲ್ಲಾ ಗ್ರಾಹಕರ ವೇದಿಕೆಗಳಲ್ಲಿ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಖಾಲಿಯಿದ್ದು, ಇನ್ನುಳಿದ ಜಿಲ್ಲಾ ಗ್ರಾಹಕ ವೇದಿಕೆಗಳಲ್ಲಿ ಭರ್ತಿಯಾಗಿದೆ.

ಬೆಂಗಳೂರು ನಗರ, ಬೆಂಗಳೂರು ನಗರ 3ನೇ ಅಪರ, ಬೆಂಗಳೂರು ನಗರ 4ನೇ ಅಪರ ಮತ್ತು ಉಡುಪಿ ಜಿಲ್ಲಾ ಗ್ರಾಹಕರ ವೇದಿಕೆಗಳಲ್ಲಿ ಬೆರಳಚ್ಚುಗಾರರ ಹುದ್ದೆಗಳು ಖಾಲಿಯಿದ್ದು, ಇನ್ನುಳಿದ ಜಿಲ್ಲೆಗಳಲ್ಲಿ ಖಾಲಿಯಿರುವುದಿಲ್ಲ.

ಬೆಂಗಳೂರು ನಗರ ಜಿಲ್ಲಾ ವೇದಿಕೆಯಲ್ಲಿ ವಾಹನ ಚಾಲಕರ ಹುದ್ದೆ ಖಾಲಿಯಿದೆ.

ಬೆಂಗಳೂರು ನಗರ 3ನೇ ಅಪರ, ಬಿಜಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ಗುಲ್ಬರ್ಗಾ, ಹಾಸನ ಕೋಲಾರ, ರಾಯಚೂರು, ಶಿವಮೊಗ್ಗ, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಗದಗ, ಕೊಪ್ಪಳ, ಚಾಮರಾಜನಗರ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಗ್ರೂಪ್-ಡಿ ಹುದ್ದೆಗಳು ಖಾಲಿಯಿದ್ದು, ಇನ್ನುಳಿದ ಜಿಲ್ಲೆಗಳಲ್ಲಿ ಭರ್ತಿ ಮಾಡಲಾಗಿದೆ.

ಈ ಹುದ್ದೆಗಳನ್ನು ಭರ್ತಿ ಮಾಡಲು ವ್ಯಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಸಧ್ಯ ವಿವಿಧ ಇಲಾಖೆಗಳಿಂದ ನಿಯೋಜನೆ ಮೇಲೆ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ, ಕೆಲಸ ನಿರ್ವಹಿಸುತ್ತಿದ್ದಾರೆ.

5. ಅನುಬಂಧ II ತಡವಾಗಿ ಬಂದ ಪ್ರಶ್ನೋತ್ತರಗಳು (10.7.2003ರಿಂದ 8.8.2003)

ಕಾರವಾರ ಬಂದರನ್ನು ಅಭಿವೃದ್ಧಿಪಡಿಸುವುದು

2270 (2936) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಮೀನುಗಾರಿಕೆ ಮತ್ತು ಬಂದರುಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಾರವಾರದ ಬಂದರು ಅಭಿವೃದ್ಧಿಗೆ ಸರ್ಕಾರ ಯೋಜನೆ ಸಿದ್ದಪಡಿಸಿದೆಯೇ? ಸಿದ್ದಪಡಿಸಿದ್ದಲ್ಲಿ ಯೋಜನೆಯ ವಿವರ ನೀಡುವುದು?

ಶ್ರೀ ವಸಂತ ವಿ. ಸಾಲಿಯಾನ (ಮೀನುಗಾರಿಕೆ ಮತ್ತು ಬಂದರುಗಳ ರಾಜ್ಯ ಸಚಿವರು)

ಅ) ಹೌದು.

ಹಾಲಿ ಕಾರವಾರ ಬಂದರಿನಲ್ಲಿ ಬ್ರೇಕ್ ವಾಟರ್ ನಿರ್ಮಾಣವನ್ನು ಕೈಗೊಳ್ಳಲಾಗಿದೆ. 2ನೇ ಹಂತದ ಕಾಮಗಾರಿಗೆ ಸಲಹೆಗಾರರನ್ನು ನೇಮಿಸಿ (ಮೆ: ಕರ್ನಾಟಕ ತಾಂತ್ರಿಕ ಸಲಹಾ ಸಮಿತಿ-TECSOK) ಪೂರ್ವಭಾವಿ ವರದಿಯನ್ನು ಪಡೆಯಲಾಗಿದೆ. ಸದರಿ ವರದಿಯು ಸರ್ಕಾರ ಪರಿಶೀಲನೆಯಲ್ಲಿರುತ್ತದೆ.

ಕಾರವಾರ ಬಂದರಿನ ಮೂಲಕ ಕಂಟೈನರ್ ಸೇವೆ containerisation ಬಗ್ಗೆ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಕಾರವಾರ ಬಂದರಿನಲ್ಲಿ ಹೂಳೆತ್ತಲು ಹಾಗೂ ಬಂದರಿನ ಆಳವನ್ನು ಹೆಚ್ಚಿಸಲು ಯೋಜನೆಯನ್ನು ತಯಾರಿಸಲಾಗಿದೆ.

ಬಂದರಿನ ಸುರಕ್ಷತೆಯನ್ನು ಹೆಚ್ಚಿಸಲು ಕ್ರಮವನ್ನು ತೆಗೆದುಕೊಳ್ಳಲಾಗಿದೆ.

ಮೀನುಗಾರಿಕೆ ಇಲಾಖೆಯಲ್ಲಿ ಹೊಸ ಕಾರ್ಯಕ್ರಮಗಳು

2288 (2737) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಮೀನುಗಾರಿಕೆ ಮತ್ತು ಬಂದರುಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕಾ ಇಲಾಖೆಯು ಕೈಗೊಂಡ ಹೊಸ ಕಾರ್ಯಕ್ರಮಗಳು/ಯೋಜನೆಗಳು ಯಾವುವು;

ಆ) ಅವುಗಳಿಗೆ ಅನುಮೋದಿಸಿದ ಮೊತ್ತವೆಷ್ಟು;

ಇ) ಪ್ರಗತಿಯಲ್ಲಿರುವ ಯೋಜನೆಗಳ ಕ್ಷೇತ್ರವಾರು ವಿವರ ನೀಡುವುದು?

ಶ್ರೀ ವಸಂತ ವಿ. ಸಾಲಯಾನ (ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು)

ಅ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕಾ ಇಲಾಖೆಯು ಕೈಗೊಂಡ ಹೊಸ ಕಾರ್ಯಕ್ರಮಗಳು ಈ ಕೆಳಗಿನಂತಿವೆ.